**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ಶೈಶಾ-04/ಯುಸಂ-4/2016-17

ನಿರ್ದೇಶಕರ ಕಛೇರಿ.
ಪದವಿ ಪೂರ್ವ ಶಿಕ್ಷಣ ಇಲಾಖೆ
ಸಂಪಿಗೆ ರಸ್ತೆ. 18ನೇ ಕ್ರಾಸ್
ಮಲ್ಲೇಶ್ವರಂ. ಬೆಂಗಳೂರು-12
ದಿನಾಂಕ: 16-08-2018.

# ಸುತ್ತೋಲೆ

ವಿಷಯ: 2018-19ನೇ ಸಾಲಿನಲ್ಲಿ ಜಿಲ್ಲಾ ಮಟ್ಟದಲ್ಲಿ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ **"ಯುವ ಸಂಸತ್ ಅಣಕು ಸ್ಪರ್ಧೆ"** ಕಾರ್ಯಕ್ರಮಗಳನ್ನು ನಡೆಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಇಲಾಖೆ ಇವರ ಪತ್ರ ಸಂಖ್ಯೆ:ಸಂವ್ಯಶಾಇ 02 ಯುಸಂಸ್ಪ 2018 ದಿನಾಂಕ 04/08/2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2018-19ನೇ ಸಾಲಿನಲ್ಲಿ, ಪದವಿ ಪೂರ್ವ ಶಿಕ್ಷಣ ವಿದ್ಯಾರ್ಥಿಗಳಿಗೆ ಯುವ ಸಂಸತ್ ಸ್ಪರ್ಧೆ ಕಾರ್ಯಕ್ರಮಗಳನ್ನು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ನಡೆಸುವ ಬಗ್ಗೆ ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸಿ, ಅವಶ್ಯಕ ಪೂರ್ವ ತಯಾರಿ ಕ್ರಮಗಳನ್ನು ಕೂಡಲೇ ಕೈಗೊಂಡು ವರದಿಯನ್ನು ಇಲಾಖೆ/ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಇಲಾಖೆ ಇವರಿಗೆ ತುರ್ತಾಗಿ ಈ ಕೆಳಕಂಡಂತೆ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ.

ಜಿಲ್ಲಾ ಮಟ್ಟದ ಸ್ಪರ್ಧೆಗಳನ್ನು ಆಯೋಜಿಸಲು ಪ್ರತಿ ಜಿಲ್ಲೆಯ ಉಪನಿರ್ದೇಶಕರ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಹಿರಿಯ/ಕ್ರಿಯಾಶೀಲ ಪ್ರಾಂಶುಪಾಲರು ಮತ್ತು ರಾಜ್ಯಶಾಸ್ತ್ರದ ಉಪನ್ಯಾಸಕರನ್ನು ಒಳಗೊಂಡ ಒಂದು ಸಮಿತಿಯನ್ನು ರಚಿಸಿ ಸಂಸದೀಯ ವ್ಯವಹಾರಗಳ ಇಲಾಖೆಯಿಂದ ನಿಯೋಜಿತಗೊಂಡ ಅಧಿಕಾರಿಗಳ ಹಾಗೂ ಆಹ್ವಾನಿತ ವಿಧಾನಸಭೆ ಸದಸ್ಯರ ಸಮಕ್ಷಮದಲ್ಲಿ ಸ್ಪರ್ಧೆಗಳನ್ನು ಆಯೋಜಿಸುವುದು.

1. ಜಿಲ್ಲಾ ಮಟ್ಟದ ಸ್ಪರ್ಧೆಗಳನ್ನು ಆಯೋಜಿಸಲು ಪ್ರತಿ ಜಿಲ್ಲೆಯ ಉಪನಿರ್ದೇಶಕರ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಹಿರಿಯ/ಕ್ರಿಯಾಶೀಲ ಪ್ರಾಂಶುಪಾಲರು ಮತ್ತು ರಾಜ್ಯಶಾಸ್ತ್ರದ ಉಪನ್ಯಾಸಕರನ್ನು ಒಳಗೊಂಡ ಒಂದು ಸಮಿತಿಯನ್ನು ರಚಿಸಿ ಸಂಸದೀಯ ವ್ಯವಹಾರಗಳ ಇಲಾಖೆಯಿಂದ ನಿಯೋಜಿತಗೊಂಡ ಅಧಿಕಾರಿಗಳ ಹಾಗೂ ಆಹ್ವಾನಿತ ವಿಧಾನಸಭೆ ಸದಸ್ಯರ ಸಮಕ್ಷಮದಲ್ಲಿ ಸ್ಪರ್ಧೆಗಳನ್ನು ಆಯೋಜಿಸುವುದು
2. ಪ್ರತಿ ಜಿಲ್ಲೆಯಿಂದ ಕನಿಷ್ಠ 60 ಸ್ಪರ್ಧಾಳುಗಳ ಹೆಸರು, ತರಗತಿ ಹಾಗೂ ಕಾಲೇಜು ವಿವರ ಮತ್ತು 1 ಹಾಗೂ 2ನೇ ಸ್ಥಾನವನ್ನು ಪಡೆದ ವಿಜೇತರ ಹೆಸರು, ತರಗತಿ ಹಾಗೂ ಕಾಲೇಜಿನ ವಿವರ ಹಾಗೂ ಕಾರ್ಯಕ್ರಮದ ಕನಿಷ್ಠ 3 ಭಾವಚಿತ್ರಗಳನ್ನು ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳ ಇಲಾಖೆಗೆ ಕಳುಹಿಸುವುದು.
3. ರಾಜ್ಯ ಮಟ್ಟದ ಸ್ಪರ್ಧೆಗಳನ್ನು ಡಿಸೆಂಬರ್-2018ರ ಕೊನೆಯ ವಾರದೊಳಗೆ ಆಯೋಜಿಸಲು ಉದ್ದೇಶಿಸಿರುವುದರಿಂದ, ಜಿಲ್ಲಾ ಮಟ್ಟದ ಸ್ಪರ್ಧೆಗಳನ್ನು ನವೆಂಬರ್-2018ರ ಕೊನೆಯ ವಾರದೊಳಗೆ ಆಯೋಜಿಸಿದ ಮಾಹಿತಿಯನ್ನು ಕಛೇರಿಗೆ ಕಳುಹಿಸಲು ತುರ್ತು ಕ್ರಮ ತೆಗೆದುಕೊಳ್ಳುವುದು.
4. ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದ ಉಪ ನಿರ್ದೇಶಕರುಗಳಿಗೆ ಇಲಾಖೆಯಿಂದ ಅನುದಾನ ಮೊತ್ತವನ್ನು ಬಿಡುಗಡೆ ಮಾಡಲಾಗುವುದಿಲ್ಲ. ಯಾವುದೇ ವ್ಯತ್ಯಯಗಳು ಉಂಟಾದಲ್ಲಿ ಸಂಬಂಧಿಸಿದ ಉಪ ನಿರ್ದೇಶಕರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಜಿಲ್ಲಾ ಮಟ್ಟದ ಸ್ಪರ್ಧೆಯನ್ನು ಆಯೋಜಿಸಲು ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ **ಶ್ರೀ ಮೊಹಮದ್ ಜಿಯಾ ಉಲ್ಲಾ ಖಾನ್, ಸಹಾಯಕ ನಿರ್ದೇಶಕರು, ಶೈಕ್ಷಣಿಕ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು-12. ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ. (ಮೊ.ಸಂ 9845496711)**

18/8/15

ಜಂಟಿ ನಿರ್ದೇಶಕರು (ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ಶ್ರೀ ದ್ವಾರಕನಾಥ್ ಬಾಬು, ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಇಲಾಖೆ, ವಿಧಾನಸೌಧ, ಬೆಂಗಳೂರು-560001 ಇವರ ಮಾಹಿತಿಗಾಗಿ ಕಳುಹಿಸಿದೆ.
2. ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರುಗಳಿಗೆ ಮುಂದಿನ ಕ್ರಮಕ್ಕಾಗಿ.
3. ಮಾನ್ಯ ನಿರ್ದೇಶಕರ ಆಪ್ತಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ.
4. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ವೆಬ್ ಸೈಟ್‌ಗೆ ಅಳವಡಿಸಲು.
5. ಕಛೇರಿ ಪ್ರತಿ.